ಮೈಸೂರು ವಿಶ್ವವಿದ್ಯಾನಿಲಯ

(4.0 ಸ್ಕೇಲ್‌ನ 3.47 ಸಿಜಿಪಿಎಯೊಂದಿಗೆ ನ್ಯಾಕ್‌ನಿಂದ ಮರು ಮಾನ್ಯತೆ ಪಡೆದಿದೆ)

(ಎನ್‌ಐಆರ್‌ಎಫ್-2020 ವಿಶ್ವವಿದ್ಯಾನಿಲಯ ವಿಭಾಗದಲ್ಲಿ 27ನೇ ಸ್ಥಾನ ಮತ್ತು ಒಟ್ಟಾರೆ ವಿಭಾಗದಲ್ಲಿ 47ನೇ ಸ್ಥಾನ)

ವಿಶ್ವವಿದ್ಯಾನಿಲಯ ಕಾರ್ಯಸೌಧ, ಕ್ರಾಫರ್ಡ್ ಭವನ, ಮೈಸೂರು-570 005

Website : www.uni-mysore.ac.in

ಸಂಖ್ಯೆ: ವಿ.ಕ್ಷೇ.ಪಾ.10/26/440/2018-19 ದಿನಾಂಕ: 01-09-2020

## ಸುತ್ತೋಲೆ

ವಿಷಯ : ಅಂತಿಮ ವರ್ಷದ ಪದವಿ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯಗಳಲ್ಲಿ ವಾಸ್ತವ್ಯ ಕಲ್ಪಿಸುವ ಬಗ್ಗೆ

ಉಲ್ಲೇಖ : ವಿಶ್ವವಿದ್ಯಾನಿಲಯದ ಸುತ್ತೋಲೆ ಸಂಖ್ಯೆ: ಎಸಿ7 (ಎ)/456/2016-17 ದಿ: 14-08-2020.

*****

ಮೈಸೂರು ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಹಾಗೂ ವಿವಿಧ ಅಧ್ಯಯನ ಹಾಗೂ ವಿಭಾಗಗಳ ಮುಖ್ಯಸ್ಥರುಗಳಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, ಕೋವಿಡ್-19 ಸಾಂಕ್ರಾಮಿಕ ಮಹಾಮಾರಿ ರೋಗ ಹರಡುವ ಕಾರಣ, ಕೇಂದ್ರ ಸರ್ಕಾರದ ಆದೇಶದ ಮೇರೆಗೆ ಕಾಲೇಜು/ವಿವಿಧ ವಿಭಾಗಗಳನ್ನು ಲಾಕ್‌ಡೌನ್ ಮಾಡಿದ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕೆ ಕ್ರಮವಾಗಿ ಮಾರ್ಚ್ 2020 ಕೊನೆಯ ವಾರದಿಂದ ವಿಶ್ವವಿದ್ಯಾನಿಲಯದ ಎಲ್ಲಾ ವಿದ್ಯಾರ್ಥಿನಿಲಯಗಳನ್ನು ಸ್ಥಗಿತಗೊಳಿಸಲಾಗಿದ್ದು, ವಿಶ್ವವಿದ್ಯಾನಿಲಯದ ಉಲ್ಲೇಖಿದ ಸುತ್ತೋಲೆಯಲ್ಲಿ 2019-20ನೇ ಶೈಕ್ಷಣಿಕ ಸಾಲಿನ ಅಂತಿಮ ವರ್ಷದ ಪದವಿ ಮತ್ತು ಸ್ನಾತಕೋತ್ತರ ತರಗತಿಗಳನ್ನು ಪ್ರಾರಂಭಿಸಲು ಹಾಗೂ ಪರೀಕ್ಷೆಗಳನ್ನು ನಡೆಸಲು ತೀರ್ಮಾನಿಸಿರುವುದರಿಂದ, ವಿದ್ಯಾರ್ಥಿನಿಲಯಗಳಲ್ಲಿ ಈ ಹಿಂದೆ ಪ್ರವೇಶಾತಿ ಪಡೆದಿರುವ ಅಂತಿಮ ವರ್ಷದ ನಿಲಯಾರ್ಥಿಗಳಿಗೆ Standard Operating Procedure (SOP) ಪ್ರಕಾರ ದಿನಾಂಕ : 01-09-2020 ರಿಂದ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಿ, ವಿದ್ಯಾರ್ಥಿಗಳು ಉಳಿದುಕೊಳ್ಳಲು ಕೊಠಡಿ ಮತ್ತು ಭೋಜನ ವ್ಯವಸ್ಥೆಯನ್ನು ಕಲ್ಪಿಸಲಾಗುತ್ತದೆ ಎಂಬ ವಿಷಯವನ್ನು ಈ ಮೂಲಕ ತಿಳಿಸಲಾಗಿದೆ.

1/9/2020

ಕುಲಸಚಿವ

ಗೆ :-

1. ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರುಗಳು, ನಿರ್ದೇಶಕರು/ಸಂಯೋಜನಾಧಿಕಾರಿಗಳು/ ಮುಖ್ಯಸ್ಥರು, ಮಾನಸಗಂಗೋತ್ರಿ/ಸ್ನಾತಕೋತ್ತರ ಕೇಂದ್ರ, ಹಾಸನ/ಸ್ನಾತಕೋತ್ತರ ಕೇಂದ್ರ, ಮಂಡ್ಯ /ಡಾ.ಬಿ.ಆರ್.ಅಂಬೇಡ್ಕರ್ ಸ್ನಾತ್ತಕೋತ್ತರ ಕೇಂದ್ರ, ಚಾಮರಾಜನಗರ.
2. ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳ ಪ್ರಾಂಶುಪಾಲರುಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ಆಡಳಿತಾಧಿಕಾರಿಗಳು, ಆಡಳಿತಾಧಿಕಾರಿಗಳ ಕಛೇರಿ, ಮಾನಸಗಂಗೋತ್ರಿ, ಮೈಸೂರು.
4. ಸಂಯೋಜಕರು, ಐ.ಸಿ.ಡಿ. ಗಣಕ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು. – ಈ ಅಧಿಸೂಚನೆಯನ್ನು ವಿದ್ಯಾರ್ಥಿಗಳ ಮಾಹಿತಿಗಾಗಿ ಹಾಗೂ ಸಾರ್ವಜನಿಕರ ಮಾಹಿತಿಗಾಗಿ ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಬೇಕೆಂದು ಕೋರಿದೆ.
5. ಶಿಕ್ಷಕ ಸಲಹೆಗಾರರು, ಎಲ್ಲಾ ಸ್ನಾತ್ತಕ ಮತ್ತು ಸ್ನಾತಕೋತ್ತರ ವಿದ್ಯಾರ್ಥಿನಿಲಯಗಳು, ಮೈಸೂರು, ಮಂಡ್ಯ, ಹಾಸನ ಮತ್ತು ಚಾಮರಾಜನಗರ.
6. ಮಾನ್ಯ ಕುಲಪತಿಗಳು/ಕುಲಸಚಿವರು/ಕುಲಸಚಿವರು(ಪರೀಕ್ಷಾಂಗ) ಹಾಗೂ ಹಣಕಾಸು ಅಧಿಕಾರಿಗಳ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
7. ಕಚೇರಿ ಪ್ರತಿ/ರಕ್ಷಾ ಕಡತ.